ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿ ರಸ್ತೆಗಳ ಅಗಲೀಕರಣಕ್ಕೆ ಕಡಿತ ಮಾಡಿದ ಮರಗಳ ಕುರಿತು

ಶ್ರೀ ಆರ್. ಪ್ರಸನ್ನಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

83 (51) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ರಸ್ತೆಗಳ ಅಗಲೀಕರಣಕ್ಕೆ ಕಡಿದ ಮರಗಳ ಸಂಖ್ಯೆ ಎಷ್ಟು;

(ಆ) ರಾಜ್ಯದಲ್ಲಿ ರಸ್ತೆಗಳ ಅಗಲೀಕರಣ ಮುಗಿದ ನಂತರ ರಸ್ತೆ ಬದಿಯಲ್ಲಿ ಎಷ್ಟು ಗಿಡಗಳನ್ನು ನೆಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಒಟ್ಟು ಅರಣ್ಯ ಪ್ರದೇಶವೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಸರ್ವೆ ನಂ. ವಿಸ್ತೀರ್ಣದ ವಿವರ ನೀಡುವುದು)

(ಈ) ಹಲವಾರು ವರ್ಷಗಳಿಂದ ಒತ್ತುವರಿ ಅರಣ್ಯ ಭೂಮಿಯನ್ನೇ ನಂಬಿ ಜೀವನ ಸಾಗಿಸುವ ಬಡ ಕುಟುಂಬಗಳಿಗೆ ಪರ್ಯಾಯ ವ್ಯವಸ್ಥೆ ಮಾಡಲಾಗಿದೆಯೇ?